# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಶುಕ್ರವಾರ, ೦೬, ಮಾರ್ಚ್, ೨೦೨೬ (ಫಾಲ್ಗುಣ, ೧೫, ಶಕವರ್ಷ, ೧೯೪೭)<br>BENGALURU, FRIDAY, 06, MARCH, 2026 ( PHALGUNA , 15, SHAKAVARSHA, 1947) | ನಂ. ೧೮೯<br>No. 189 |
|---|---|---|

**ಕರ್ನಾಟಕ ಸರ್ಕಾರ**

ಸಂಖ್ಯೆ: ಸಿಆಸುಇ 61 ಸೇವನೆ 2024

ಕರ್ನಾಟಕ ಸರ್ಕಾರ ಸಚಿವಾಲಯ
ವಿಧಾನಸೌಧ
ಡಾ|| ಬಿ.ಆರ್ ಅಂಬೇಡ್ಕರ್ ವೀದಿ
ಬೆಂಗಳೂರು, ದಿನಾಂಕ: 06.03.2026

## ಅಧಿಸೂಚನೆ

ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000 ಇದನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕೆ ದಿನಾಂಕ: 06.02.2026ರ ಅಧಿಸೂಚನೆ ಸಂಖ್ಯೆ: ಸಿಆಸುಇ 61 ಸೇವನೆ 2024 ರನ್ವಯ ಪ್ರಕಟಿಸಿರುವ ಈ ಮುಂದಿನ ನಿಯಮಗಳ ಕರಡನ್ನು ಅಧಿಕೃತ ರಾಜ್ಯಪತ್ರದಲ್ಲಿ ಪ್ರಕಟಿಸಿದ ದಿನಾಂಕದಿಂದ 15 ದಿನಗಳೊಳಗಾಗಿ ಅದರಿಂದ ಬಾಧಿತರಾಗುವ ಸಂಭವವಿರುವ ಎಲ್ಲಾ ವ್ಯಕ್ತಿಗಳಿಂದ ಆಕ್ಷೇಪಣೆಗಳನ್ನು ಮತ್ತು ಸಲಹೆಗಳನ್ನು ಆಹ್ವಾನಿಸಿ ದಿನಾಂಕ: 06.02.2026 ರಂದು ಕರ್ನಾಟಕ ರಾಜ್ಯಪತ್ರದ ಭಾಗ IV-ಎ ರಲ್ಲಿ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14)ರ 3ನೇ ಪ್ರಕರಣದ (2)ನೇ ಉಪ-ಪ್ರಕರಣದ (ಎ) ಖಂಡವನ್ನು ಪ್ರಕರಣದ 8 ರೊಂದಿಗೆ ಓದಿಕೊಂಡು ಅಗತ್ಯಪಡಿಸಲಾದಂತೆ ಪ್ರಕಟಿಸಲಾಗಿರುವುದರಿಂದ;

ಸದರಿ ರಾಜ್ಯಪತ್ರವನ್ನು ದಿನಾಂಕ: 06.02.2026 ರಂದು ಸಾರ್ವಜನಿಕರಿಗೆ ಲಭ್ಯವಾಗುವಂತೆ ಮಾಡಿರುವುದರಿಂದ;

ಸದರಿ ಕರಡು ನಿಯಮಗಳ ಬಗ್ಗೆ ಯಾವುದೇ ಆಕ್ಷೇಪಣೆ/ಸಲಹೆಯು ರಾಜ್ಯ ಸರ್ಕಾರದಲ್ಲಿ ಸ್ವೀಕೃತವಾಗದಿರುವುದರಿಂದ;

ಈಗ ಕರ್ನಾಟಕ ರಾಜ್ಯ ನಾಗರಿಕ ಸೇವೆಗಳ ಅಧಿನಿಯಮ, 1978 (1990 ರ ಕರ್ನಾಟಕ ಅಧಿನಿಯಮ 14) ರ 3ನೇ ಪ್ರಕರಣದ (1) ನೇ ಉಪ ಪ್ರಕರಣವನ್ನು 8ನೇ ಪ್ರಕರಣದೊಂದಿಗೆ

ಒದಿಕೊಂಡಂತೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಿ, ಕರ್ನಾಟಕ ಸರ್ಕಾರವು ಈ ಕೆಳಕಂಡ ನಿಯಮಗಳನ್ನು ರಚಿಸುತ್ತದೆ, ಎಂದರೆ:-

## ನಿಯಮಗಳು

**1. ಶೀರ್ಷಿಕೆ ಮತ್ತು ಪ್ರಾರಂಭ.-** (1) ಈ ನಿಯಮಗಳನ್ನು ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) (ತಿದ್ದುಪಡಿ) ನಿಯಮಗಳು, 2026 ಎಂದು ಕರೆಯತಕ್ಕದ್ದು.

(2) ಇವು ಅಧಿಕೃತ ರಾಜ್ಯಪತ್ರದಲ್ಲಿ ಅಂತಿಮವಾಗಿ ಪ್ರಕಟಗೊಂಡ ದಿನಾಂಕದಿಂದ ಜಾರಿಗೆ ಬರತಕ್ಕದ್ದು.

**2. ನಿಯಮ 10ಎ ರ ಸೇರ್ಪಡೆ.-** ಕರ್ನಾಟಕ ನಾಗರಿಕ ಸೇವಾ (ಕಾರ್ಯನಿರ್ವಹಣಾ ವರದಿಗಳು) ನಿಯಮಗಳು, 2000ರ ನಿಯಮ 10ರ ನಂತರ, ಈ ಕೆಳಕಂಡದ್ದನ್ನು ಸೇರಿಸತಕ್ಕದ್ದು.

**10ಎ. ಪರಾಮರ್ಶೆ ಸಮಿತಿ**: ರಾಜ್ಯ ನಾಗರಿಕ ಸೇವೆಗಳ ಗ್ರೂಪ್–ಎ ವೃಂದದ ಅಧಿಕಾರಿಗಳ ವಾರ್ಷಿಕ ಕಾರ್ಯನಿರ್ವಹಣಾ ವರದಿಗಳಲ್ಲಿ ನೀಡಿರುವ ಶ್ರೇಣಿಯನ್ನು ಮೇಲ್ದರ್ಜೆಗೇರಿಸಲು ಅಧಿಕಾರಿಗಳು ಸಲ್ಲಿಸುವ ಮನವಿಗಳನ್ನು ಪರಿಗಣಿಸಲು ಮತ್ತು ಕಾರ್ಯನಿರ್ವಹಣಾ ವರದಿಯಲ್ಲಿ ನೀಡಿರುವ ಶ್ರೇಣಿಯನ್ನು (Grading) ಪರಾಮರ್ಶಿಸಲು ಈ ಕೆಳಕಂಡ ಸದಸ್ಯರುಗಳನ್ನು ಒಳಗೊಂಡ ಪರಾಮರ್ಶೆ ಸಮಿತಿಯನ್ನು ರಚಿಸಿದೆ.

| | | |
|---|---|---|
| 1. | ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ. | ಅಧ್ಯಕ್ಷರು |
| 2. | ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ. | ಸದಸ್ಯರು |
| 3. | ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ. | ಸದಸ್ಯರು |
| 4. | ಸಚಿವಾಲಯದ ಸಂಬಂಧಿಸಿದ ಆಡಳಿತ ಇಲಾಖೆಯ ಸರ್ಕಾರದ ವಿಶೇಷ ಕಾರ್ಯದರ್ಶಿ/ ಅಪರ ಕಾರ್ಯದರ್ಶಿ/ ಜಂಟಿ ಕಾರ್ಯದರ್ಶಿ/ಉಪ ಕಾರ್ಯದರ್ಶಿ. | ಸದಸ್ಯ ಕಾರ್ಯದರ್ಶಿ |

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಪ್ರತಿಭಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-3)

## GOVERNMENT OF KARNATAKA

No. DPAR 61 SCR 2024

Karnataka Government Secretariat,
Vidhana Soudha,
Dr. B.R Ambedkar Veedhi,
Bengaluru, dated:06.03.2026

## NOTIFICATION

Whereas the draft of the following rules to further to amend the Karnataka Civil Services (Performance Reports) Rules, 2000 was published as required by clause (a) of sub-section (2) of Section 3 read with Section 8 of the Karnataka State Civil services Act, 1978 (Karnataka Act 14 of 1990) in Notification No. DPAR 61 SCR 2024, dated: 06.02.2026 in Part IV-A of the Karnataka Gazette Extraordinary dated: 06.02.2026 inviting objections and suggestions from all persons likely to be affected thereby within fifteen days from the date of publication of the draft in the Official Gazette.

Whereas, the said Gazette was made available to the public on 06.02.2026.

Whereas, no objection/suggestion have been received in the State Government.

Now, therefore, in exercise of the powers conferred by sub-section (1) of section 3 read with section 8 of the Karnataka State Civil Services Act, 1978 (Karnataka Act 14 of 1990), the Government of Karnataka hereby makes the following rules, namely:-

## RULES

1. **Title and Commencement.-** (1) These rules may be called the Karnataka Civil Services (Performance Reports) (Amendment) Rules, 2026.

(2) They shall come into force from the date of their final publication in the official Gazette.

**2. Insertion of Rule 10A** – In the Karnataka Civil Services (Performance Reports) Rules, 2000, after Rule 10 the following shall be inserted, namely :

**10A. Review Committee:-** To consider the applications submitted by the officers belonging to Group-A cadre of the State Civil Services for the up-gradation of grading awarded in their Annual Performance Reports (APRs) and to review the grading given in the performance reports, a Review Committee is hereby constituted consisting of the following members, namely:-

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



| | | |
|---|---|---|
| 1 | The Additional Chief Secretary to Government | Chairperson |
| 2. | The Additional Chief Secretary/Principal Secretary/Secretary to Government of the concerned Administrative Department in the Secretariat | Member |
| 3. | The Secretary to Government, Department of Personnel and Administrative Reforms | Member |
| 4. | Special Secretary/Additional Secretary/ Joint Secretary/ Deputy Secretary to Government of the concerned Administrative Department in the Secretariat | Member-Secretary |

By Order and in the name of the
Governor of Karnataka,

(Prathibha. K)
Under Secretary to Government
Department of Personnel and
Administrative Reforms,
(Service Rules-3).

ಮುದ್ರಕರು ಹಾಗೂ ಪ್ರಕಾಶಕರು:- ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH